ಕರ್ನಾಟಕ ಸರ್ಕಾರ

# ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು.

ಸಂಖ್ಯೆ:ಅಯವ್ಯಯ:ಬಿ2:ಶಿವೇ:11:2015 ದಿನಾಂಕ:03ನೇ ಜುಲೈ 2015

## : ಜ್ಞಾ ಪ ನ :

**ವಿಷಯ:** ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಶಿಕ್ಷಕರು / ಸಿಬ್ಬಂದಿ ವೇತನ ಪಾವತಿಯಲ್ಲಿ ವಿಳಂಬವಾಗುತ್ತಿರುವ ಬಗ್ಗೆ.

**ಉಲ್ಲೇಖ:** ಈ ಕಛೇರಿ ಸುತ್ತೋಲೆ ಸಂಖ್ಯೆ:ಅಯವ್ಯಯ:ಬಿ.2:ವೇತನ ಪಾವತಿ:01: 2015-16, ದಿನಾಂಕ:15.04.2015.

*****

ವಿಷಯದನುಸಾರ ಸಾರ್ವಜನಿಕ ಶಿಕ್ಷಣ ಇಲಾಖೆಯ ಜಿಲ್ಲಾ ಪಂಚಾಯತ್ ಹಾಗೂ ತಾಲ್ಲೂಕು ಪಂಚಾಯತ್ ಅಡಿಯಲ್ಲಿ ಬರುವ ಯೋಜನೆ ಹಾಗೂ ಯೋಜನೇತರ ಲೆಕ್ಕ ಶೀರ್ಷಿಕೆಗಳ ಅಡಿಯಲ್ಲಿ ಅಧಿಕಾರಿಗಳು, ಶಿಕ್ಷಕ ವರ್ಗದವರು ಮತ್ತು ವಿವಿಧ ಸಿಬ್ಬಂದಿಗಳಿಗೆ ವೇತನ ಪಾವತಿಯಲ್ಲಿ ಆಗುತ್ತಿರುವ ವಿಳಂಬವನ್ನು ತಪ್ಪಿಸುವ ಸಲುವಾಗಿ ಘನ ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯಿಂದ ಅನುದಾನವನ್ನು ನೇರವಾಗಿ ಸಂಬಂಧಿಸಿದ ಜಿಲ್ಲಾ ಪಂಚಾಯತ್ ಹಾಗೂ ತಾಲ್ಲೂಕು ಪಂಚಾಯಿತಿಗಳಿಗೆ ಸಕಾಲದಲ್ಲಿ ರಾಜ್ಯ ಖಜಾನೆ ಗಣಕಜಾಲದ ಮೂಲಕ ಯೋಜನೆ ಹಾಗೂ ಯೋಜನೇತರ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿರುವುದು ಸರಿಯಷ್ಟೆ.

ಅಲ್ಲದೆ, ಈ ಕಛೇರಿಯಿಂದಲೂ ಸಹ ವೇತನ ಪಾವತಿಯಲ್ಲಿ ಯಾವುದೇ ವಿಳಂಬಕ್ಕೆ ಅವಕಾಶವಿಲ್ಲದಂತೆ ಸಕಾಲದಲ್ಲಿ ವೇತನ ಪಾವತಿಗೆ ಕ್ರಮವಹಿಸಲು ಸೂಚನೆಗಳನ್ನು ನೀಡಲಾಗಿರುತ್ತದೆ. ಆದಾಗ್ಯೂ ಸಹ ಕೆಲವು ಜಿಲ್ಲೆಗಳ ತಾಲ್ಲೂಕುಗಳಲ್ಲಿ ವೇತನ ಪಾವತಿಯಲ್ಲಿ ವಿಶೇಷವಾಗಿ ಯೋಜನಾ ಲೆಕ್ಕಶೀರ್ಷಿಕೆಗಳಲ್ಲಿ ಅನುದಾನದ ಕೊರತೆ, ತಡವಾಗಿ ಅನುದಾನ ಬಿಡುಗಡೆ, ಮೊದಲಾದ ಕಾರಣಗಳಿಂದ ವೇತನ ಪಾವತಿಯಲ್ಲಿ ವಿಳಂಬವಾಗುತ್ತಿರುವುದಾಗಿ ತಿಳಿದು ಬರುತ್ತಿದೆ.

ಸರ್ಕಾರವು ಏಕಕಾಲಕ್ಕೆ ಯಾವುದೇ ವಿಳಂಬವಿಲ್ಲದೇ ಯೋಜನೆ ಹಾಗೂ ಯೋಜನೇತರ ಲೆಕ್ಕ ಶೀರ್ಷಿಕೆಗಳ ಅನುದಾನವನ್ನು ಬಿಡುಗಡೆ ಮಾಡಿದರೂ ಸಹ ಯಾವ ನಿರ್ದಿಷ್ಟ ಕಾರಣದಿಂದ ವೇತನ ಪಾವತಿಯಲ್ಲಿ ವಿಳಂಬವಾಗುತ್ತಿದೆ ಎಂಬುದು ಈ ಕಛೇರಿಯ ಹಂತದಲ್ಲಿ ತಿಳಿದು ಬರುವುದಿಲ್ಲ. ಆದುದರಿಂದ ಇನ್ನು ಮುಂದೆ ವೇತನ ಪಾವತಿಯಲ್ಲಿ ಯಾವುದೇ ವಿಳಂಬಕ್ಕೆ ಆಸ್ಪದ ನೀಡದಂತೆ ಎಲ್ಲಾ ವೇತನ ಸೆಳೆಯುವ ಮತ್ತು ಬಟವಾಡೆ ಅಧಿಕಾರಿಗಳು ಕಡ್ಡಾಯವಾಗಿ ಕ್ರಮವಹಿಸಬೇಕಿರುತ್ತದೆ. ಆಯಾ ಜಿಲ್ಲಾ ಪಂಚಾಯತ್ ಹಾಗೂ ತಾಲ್ಲೂಕು ಪಂಚಾಯತ್ ವ್ಯಾಪ್ತಿಯಲ್ಲಿ ವೇತನ ಪಾವತಿಯಲ್ಲಿ ವಿಳಂಬಕ್ಕೆ ಕಾರಣರಾಗುವ ವೇತನ ಸೆಳೆಯುವ ಮತ್ತು ಬಟವಾಡೆ ಅಧಿಕಾರಿಗಳನ್ನು ಹೊಣೆಗಾರರನ್ನಾಗಿಸಿ ಸೂಕ್ತ ಕ್ರಮ ಜರುಗಿಸಿ ಈ ಕಛೇರಿಗೆ ವರದಿ ನೀಡಲು ಸೂಚಿಸಿದೆ.

4/7/15

ಆಯುಕ್ತರು.

ಸಾರ್ವಜನಿಕ ಶಿಕ್ಷಣ ಇಲಾಖೆ.

**ಇವರಿಗೆ:**

*01.* ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಇವರಿಗೆ ಸೂಕ್ತ ಕ್ರಮಕ್ಕಾಗಿ.

*02.* ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ, ಗುಲ್ಬರ್ಗಾ, ಇವರಿಗೆ ಸೂಕ್ತ ಕ್ರಮಕ್ಕಾಗಿ.

*03.* ನಿರ್ದೇಶಕರು, [ಪ್ರಾಥಮಿಕ ಶಿಕ್ಷಣ] ಮತ್ತು [ಪ್ರೌಢ ಶಿಕ್ಷಣ], ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು, ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.

*04.* ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು [ಆಡಳಿತ], ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಸೂಕ್ತ ಕ್ರಮಕ್ಕಾಗಿ.

*05.* ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಸಂಬಂಧಿಸಿದ ಮುಖ್ಯಶಿಕ್ಷಕರುಗಳಿಗೆ ಜಿಲ್ಲಾ ಉಪನಿರ್ದೇಶಕರ ಮೂಖಾಂತರ.

*06.* ಕಛೇರಿ ಪ್ರತಿ.

ಪೂರ್ಣಿಮ. \\Typing3server\e\E\Budget\337-2015.doc